ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ದಿನಾಂಕ.01.10.2026

ಸಂಖ್ಯೆ:ಜಿಎಲ್13/05/2026-27

## ಸುತ್ತೋಲೆ

ವಿಷಯ: ಕರ್ನಾಟಕ ಸರ್ಕಾರದ ಗೌರವಾನ್ವಿತ ಉನ್ನತ ಶಿಕ್ಷಣ ಸಚಿವರು ಮತ್ತು ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಇವರು ಮೈ.ವಿ.ವಿ.ನಿಲಯಕ್ಕೆ ಭೇಟಿ ನೀಡುತ್ತಿರುವ ಬಗ್ಗೆ.

ಉಲ್ಲೇಖ: ಕಾರ್ಯನಿರ್ವಾಹಕ ನಿರ್ದೇಶಕರು, ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು ಇವರ ಪತ್ರದ ಸಂಖ್ಯೆ: ಕೆಎಸ್‌ಹೆಚ್ಇಸಿ/39/ Uni.Review/2026-27/851, ದಿನಾಂಕ:23.09.2026.

****

ಗೌರವಾನ್ವಿತ ಉನ್ನತ ಶಿಕ್ಷಣ ಸಚಿವರಾದ **ಶ್ರೀಯುತ ಬಸವರಾಜ್‌ರಾಯರೆಡ್ಡಿರವರು** ಮತ್ತು ಪ್ರೊ. ಎಸ್. ಆರ್. ನಿರಂಜನ, ಉಪಾಧ್ಯಕ್ಷರು, ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು-ಇವರುಗಳು ದಿನಾಂಕ:06.10.2026 ಮಂಗಳವಾರ ಮತ್ತು 07.10.2026 ಬುಧವಾರ ಈ ಎರಡು ದಿನದಂದು ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಸಭೆ ನಡೆಸಲಿದ್ದಾರೆ.

ಈ ಹಿನ್ನೆಲೆಯಲ್ಲಿ, ಸದರಿ ದಿನಾಂಕಗಳಂದು ಮೈಸೂರು ವಿಶ್ವವಿದ್ಯಾನಿಲಯದ ವಿಭಾಗಗಳಿಗೆ/ಕಛೇರಿಗಳಿಗೆ, ಯಾವುದೇ ವೇಳೆಯಲ್ಲಿ ಭೇಟಿ ನೀಡುವ ಸಂಭವವಿರುವುದರಿಂದ ತಮ್ಮ ವಿಭಾಗ/ಕಛೇರಿಯ ಯಾವ ಉದ್ಯೋಗಿಗಳಿಗೂ ಈ ಎರಡು ದಿವಸ ರಜೆಯನ್ನು ಮಂಜೂರು ಮಾಡಬಾರದೆಂದು ಮತ್ತು ಎಲ್ಲಾ ಉದ್ಯೋಗಿಗಳಿಗೂ ಕಛೇರಿಯಲ್ಲಿ ತಪ್ಪದೇ ಹಾಜರಿರುವಂತೆ ಸೂಚಿಸಲು ತಿಳಿಸಲಾಗಿದೆ.

ಕುಲಸಚಿವರು
**ಕುಲಸಚಿವರು**
**ಮೈಸೂರು ವಿಶ್ವವಿದ್ಯಾನಿಲಯ**
**ಮೈಸೂರು-570 005**

ಗೆ,

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು ಮತ್ತು ಸಂಯೋಜನಾಧಿಕಾರಿಗಳು ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿ.ವಿ., ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
7. ಸಂಯೋಜಕರು, ಐ.ಡಿ.ಸಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಇವರಿಗೆ **ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.**
8. ಎಲ್ಲಾ ಉಪ ಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
10. ಕಛೇರಿ ಪ್ರತಿ.